# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಯೋಜನೆಯ ಮತ್ತು ಸಂಶೋಧನೆ ಕಾರ್ಯಕ್ರಮದಡಿ ಅನುದಾನ ಬಿಡುಗಡೆ ಕೋರಿ ಬರುವ ಪ್ರಸ್ತಾವನೆಗಳ ಪರಿಶೀಲನೆಗಾಗಿ ಸಮಿತಿ ರಚಿಸುವ ಬಗ್ಗೆ.

ಓದಲಾಗಿದೆ: (1) ಸರ್ಕಾರದ ಆದೇಶ ಸಂಖ್ಯೆ: ಕೃತೋಇ 134 ಕೃಯೋಕಾ 2006, ದಿನಾಂಕ:01.09.2006

(2) ಕೃಷಿ ಆಯುಕ್ತರ ಪತ್ರ ಸಂಖ್ಯೆ: ಪಿಎಲ್‌ಎನ್/ತಾಂ-4/ಆರ್&ಡಿ/ 2014-15, ದಿನಾಂಕ:02.09.2014.

------

ಪ್ರಸ್ತಾವನೆ:

ಮೇಲೆ ಓದಲಾದ (1)ರ ಆದೇಶ ದಿನಾಂಕ: 01.09.2006 ರಲ್ಲಿ, ಅಲ್ಪಾವಧಿ ಸಂಶೋಧನೆ/ ಅಧ್ಯಯನ ಇವುಗಳನ್ನು ಕೈಗೆತ್ತಿಕೊಳ್ಳುವ ಸಲುವಾಗಿ ಆರ್ಥಿಕ ನೆರವು ಕೋರಿ ಕೃಷಿ ಇಲಾಖೆಯಲ್ಲಿ ಸ್ವೀಕೃತವಾಗುವ ಪ್ರಸ್ತಾವನೆಗಳ ಅವಶ್ಯಕತೆ ಹಾಗೂ ಆದ್ಯತೆಗಳನ್ನು ಗುರುತಿಸಿ, ಸರ್ಕಾರಕ್ಕೆ ಶಿಫಾರಸ್ಸು ಮಾಡುವ ಸಲುವಾಗಿ ಕೃಷಿ ಆಯುಕ್ತರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ.

ಹಾಲಿ ಕೃಷಿ ವಿಶ್ವವಿದ್ಯಾಲಯ, ರಾಯಚೂರು ಹಾಗೂ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ ಇವುಗಳು ಸ್ಥಾಪನೆಯಾಗಿರುವುದರಿಂದ ಆ ವಿಶ್ವವಿದ್ಯಾಲಯಗಳ ಸಂಶೋಧನಾ ನಿರ್ದೇಶಕರುಗಳನ್ನು ಸದಸ್ಯರನ್ನಾಗಿ ನೇಮಿಸಿ ಆದೇಶ ಹೊರಡಿಸುವಂತೆ ಮೇಲೆ ಓದಲಾದ(2)ರ ಪತ್ರ ದಿನಾಂಕ:2.9.2014ರಲ್ಲಿ ಕೋರಲಾಗಿರುತ್ತದೆ. ಅದರಂತೆ ಪರಿಶೀಲಿಸಿ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃಇ/152/ಕೃಯೋಕಾ/2012, ಬೆಂಗಳೂರು, ದಿನಾಂಕ:21-10-2014.**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ಕೃತೋಇ 134 ಕೃಯೋಕಾ 2006, ದಿನಾಂಕ:01.09.2006ರ ಆದೇಶದ ಭಾಗದಲ್ಲಿ ರಚಿಸಿರುವ ಸಮಿತಿಯ ಕ್ರಮ ಸಂಖ್ಯೆ: 3ರಲ್ಲಿ ಸಂಶೋಧನಾ ನಿರ್ದೇಶಕರು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು/ ಧಾರವಾಡ/ ಎಂಬುದರ ಜೊತೆಗೆ ರಾಯಚೂರು ವಿಶ್ವವಿದ್ಯಾಲಯ/ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ ಎಂದು ಸೇರ್ಪಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜ್ಯೋತಿ ಆರ್.ಜೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ).

**ಇವರಿಗೆ:**

1. ಮಹಾಲೇಖಪಾಲರು (A&E), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು-01.
2. ಕೃಷಿ ಆಯುಕ್ತರು/ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
3. ಕುಲಪತಿಗಳು, ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು/ಧಾರವಾಡ/ರಾಯಚೂರು.
4. ಕುಲಪತಿಗಳು,ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ.
5. ಸಂಶೋಧನಾ ನಿರ್ದೇಶಕರು, ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು/ಧಾರವಾಡ/ ರಾಯಚೂರು/ಶಿವಮೊಗ್ಗ.
6. ಎಲ್ಲಾ ಜಂಟಿ ಕೃಷಿ ನಿರ್ದೇಶಕರು(ಕೃಷಿ ಆಯುಕ್ತರ ಮೂಲಕ).
7. ಅಪರ ಕೃಷಿ ನಿರ್ದೇಶಕರು (ಬೆಳೆ ಅಭಿವೃದ್ಧಿ ಮತ್ತು ಯೋಜನೆ).